# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 668 |
| ಸದಸ್ಯರ ಹೆಸರು | : | ಶ್ರೀ ಕೆ. ಹರೀಶ್ ಕುಮಾರ್ |
| ಉತ್ತರಿಸುವ ಸಚಿವರು | : | ಮಾನ್ಯ ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು. |
| ಉತ್ತರಿಸುವ ದಿನಾಂಕ | : | 17.12.2021. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರಾವಳಿ ಮತ್ತು ಮಲೆನಾಡು ಪ್ರದೇಶದಲ್ಲಿ ಅಡಿಕೆ ಬೆಳೆಗೆ ಕೊಳೆ ರೋಗ, ಗಿಡಗಳಿಗೆ ಹಳದಿ ರೋಗ ಹಾವಳಿಯಿಂದ ರೈತರಿಗೆ ನಷ್ಟ ಸಂಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ರೈತರಿಗೆ ಪರಿಹಾರ ನೀಡುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು? | ಸರ್ಕಾರದ ಗಮನಕ್ಕೆ ಬಂದಿದೆ.<br>**ಕರಾವಳಿ ಮತ್ತು ಮಲೆನಾಡು ಪ್ರದೇಶದಲ್ಲಿ ಅಡಿಕೆ ಬೆಳೆಗೆ ತಗಲುವ ರೋಗ ತಡೆಗಟ್ಟಲು ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.**<br>• ಸಾಂಪ್ರದಾಯಿಕವಾಗಿ ಅಡಿಕೆ ಬೆಳೆಯುವ ಪ್ರದೇಶಗಳಾದ ಕರಾವಳಿ ಮತ್ತು ಮಲೆನಾಡು ಪ್ರದೇಶಗಳಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಅಡಿಕೆ ಪ್ರದೇಶ ವಿಸ್ತರಣೆಯ ಕಾರ್ಯಕ್ರಮಕ್ಕೆ ಸವಲತ್ತು ನೀಡಲಾಗುತ್ತಿದೆ.<br>• ಅಡಿಕೆಗೆ ಪರ್ಯಾಯವಾಗಿ ಇತರೆ ತೋಟಗಾರಿಕೆ ಬೆಳೆಗಳಾದ ಕೋಕೋ, ತೆಂಗು, ಕಾಳುಮೆಣಸು, ಬಾಳೆ, ಏಲಕ್ಕಿ ಇತ್ಯಾದಿ ಬೆಳೆಗಳನ್ನು ಬೆಳೆಯಲು ರೈತರಿಗೆ ಸವಲತ್ತು ನೀಡಲಾಗುತ್ತಿದೆ.<br>• ಅಡಿಕೆ ಬೆಳೆ ರೈತರ ಆದಾಯವನ್ನು ಹೆಚ್ಚಿಸಲು ಅಡಿಕೆ ತೋಟದಲ್ಲಿ ಮಿಶ್ರ ಬೆಳೆ ಮತ್ತು ಅಂತರ ಬೆಳೆಗಳನ್ನು ಬೆಳೆಯಲು ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಸಹಾಯಧನವನ್ನು ನೀಡಲಾಗುತ್ತಿದೆ. |

| | | |
|---|---|---|
| | | • ಶೃಂಗೇರಿಯಲ್ಲಿ ಅಡಿಕೆ ಸಂಶೋಧನಾ ಕೇಂದ್ರವನ್ನು ಸ್ಥಾಪಿಸಲಾಗಿದ್ದು, ಹಳದಿ ಎಲೆ ರೋಗದ ಸಂಶೋಧನಾ ಕಾರ್ಯಗಳನ್ನು ಕೈಗೊಳ್ಳಲಾಗಿರುತ್ತದೆ.<br>• ಅಡಿಕೆ ಬೆಳೆ ರೈತರ ಆದಾಯವನ್ನು ಹೆಚ್ಚಿಸಲು ಅಡಿಕೆ ತೋಟದಲ್ಲಿ ಮಿಶ್ರ ಬೆಳೆ ಮತ್ತು ಅಂತರ ಬೆಳೆಗಳನ್ನು ಬೆಳೆಯಲು ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಸಹಾಯಧನವನ್ನು ನೀಡಲಾಗುತ್ತಿದೆ.<br>• ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಅಡಿಕೆಗೆ ತಗಲುವ ರೋಗಗಳ ನಿರ್ವಹಣೆಗೆ ಸಸ್ಯ ಸಂರಕ್ಷಣೆ ಔಷಧಿಗಳ ಖರೀದಿಗೆ ಸಹಾಯಧನವನ್ನು ನೀಡಲಾಗುತ್ತಿದೆ.<br>• ಅಡಿಕೆಯೂ ಸೇರಿದಂತೆ ಕಾಳುಮೆಣಸು, ಕೋಕೋ ಇತ್ಯಾದಿ ಮಿಶ್ರ ಬೆಳೆಗಳನ್ನು ಬೆಳೆಯುವ ರೈತರಿಗೆ ಪ್ರಾಥಮಿಕ ಸಂಸ್ಕರಣಾ ಘಟಕಗಳಿಗೆ ತಗಲುವ ಘಟಕ ವೆಚ್ಚದ ಶೇ.40ರಂತೆ ಸಹಾಯಧನವನ್ನು ನೀಡಲಾಗುತ್ತಿದೆ.<br>• ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಸಾಂಪ್ರದಾಯಿಕ ಪ್ರದೇಶಗಳಲ್ಲಿ ಅಡಿಕೆ ತೋಟಗಳಲ್ಲಿ ಹನಿ ನೀರಾವರಿ ಪದ್ಧತಿಯನ್ನು ಅಳವಡಿಸಲು ಸಣ್ಣ ರೈತರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ಘಟಕ ವೆಚ್ಚದ ಶೇ.90 ಹಾಗೂ ಸಾಮಾನ್ಯ ವರ್ಗದ ರೈತರಿಗೆ ಶೇ.45 ಸಹಾಯಧನವನ್ನು ನೀಡಲಾಗುತ್ತಿದೆ.<br>• ಕೃಷಿ ಯಾಂತ್ರೀಕರಣ ಉಪ ಅಭಿಯಾನ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ಅಡಿಕೆ ಸಿಪ್ಪೆ ಸುಲಿಯುವ ಯಂತ್ರದ ಖರೀದಿಗೆ ತಗಲುವ ವೆಚ್ಚದ |

| | | | |
|---|---|---|---|
| | | | ಶೇ.50ರಂತೆ ಗರಿಷ್ಟ ರೂ.75,000/-ಗಳ ಸಹಾಯ ಧನವನ್ನು ವಿತರಿಸಲಾಗುತ್ತಿದೆ ಹಾಗೂ ಸಾಮಾನ್ಯ ವರ್ಗದ ರೈತರಿಗೆ ಶೇ.40ರಂತೆ ಗರಿಷ್ಟ ರೂ.60,000/-ಗಳ ಸಹಾಯಧನವನ್ನು ನೀಡಲಾಗುತ್ತಿದೆ.<br>• ರೈತರಿಗೆ ಅಗತ್ಯವಿರುವ ತಾಂತ್ರಿಕ ಮಾಹಿತಿ ಒದಗಿಸಿ, ಬೇಸಾಯ ಕ್ರಮ ಹಾಗೂ ಸಸ್ಯ ಸಂರಕ್ಷಣೆ ಕುರಿತು ಮಾಹಿತಿ ನೀಡಲಾಗುತ್ತಿದೆ.<br>• ಅಡಿಕೆ ಬೆಳೆಗಾರರನ್ನು ತೀವ್ರವಾಗಿ ಬಾಧಿಸುತ್ತಿರುವ ಹಳದಿ ಎಲೆ ರೋಗದ ಕುರಿತ ಸಂಶೋಧನೆ ತೀವ್ರಗೊಳಿಸಲು ಹಾಗೂ ಪರ್ಯಾಯ ಬೆಳೆಯನ್ನು ಪ್ರೋತ್ಸಾಹಿಸಲು ರೂ.25.00ಕೋಟಿಗಳ ಕಾರ್ಯಕ್ರಮವನ್ನು ರೂಪಿಸಲಾಗಿದೆ. ಈ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. |

HORTI / 537/ HGM / 2021

(ಮುನಿರತ್ನ)

ಮಾನ್ಯ ತೋಟಗಾರಿಕೆ ಹಾಗೂ ಯೋಜನೆ,

ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು